# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ಕಾರ್ಯಾಲಯ, ನಂಜನಗೂಡು

**ಸಿ.ಸಿ ನಂ.1005-2018** **ಡಿ. ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಎಸ್.ಮಾಲಯ್ಯ<br>ಕೊಳ್ಳೇಗಾಲ |
| | **ಸತ್ಯ ಪ್ರತಿಜ್ಞೆಯ** ಮೇರೆಗೆ **ದಿನಾಂಕ** 13-01-2023. |

**ಪಾಟೀ ಸವಾಲುಃ ಶ್ರೀ ಎ.ಪಿ.ಎಂ.ಬಿ ವಕೀಲರಿಂದಃ**

ನಾನು ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದೆನು ಎಂದರೆ ಸರಿ. ನಾನು ಕಾರ್ಖಾನೆಗೆ ಕೆಲಸಕ್ಕೆ ಹೋಗಬೇಕಾದರೆ ಎನ್.ಜಿ.ಓ ಕಾಲೋನಿಯಲ್ಲಿ ಇದ್ದ ಮನೆಯಿಂದ ಕೆಲಸಕ್ಕೆ ಹೋಗುತ್ತಿದ್ದೆನು ಎಂದರೆ ಸರಿ. ನಿಪಿ-1 ರ ಚೆಕ್ ಮತ್ತು ಅದರಲ್ಲಿನ ಸಹಿ ನನ್ನದೇ ಆಗಿರುತ್ತದೆ. ನಾನು ಸದರಿ ಚೆಕ್ ಅನ್ನು ಪಿರ್ಯಾದಿದಾರರಿಂದ ಪಡೆದ ಸಾಲದ ಬಾಬ್ತು ನೀಡಿದ್ದೆನು ಎಂದರೆ ಸರಿ. ನಾನು ಸಕ್ಕರೆ ಕಾರ್ಖಾನೆಯಲ್ಲಿ ಹಣ ದುರುಪಯೋಗ ಪಡಿಸಿಕೊಂಡೆನು ಎಂದು ನನ್ನನ್ನು ಕೆಲಸದಿಂದ ತೆಗೆದುಹಾಕಿರುತ್ತಾರೆ ಎಂದರೆ ಸರಿಯಲ್ಲ. ಸಕ್ಕರೆ ಕಾರ್ಖಾನೆಯವರು ನೀಡಿದ ದೂರಿನ ಆಧಾರದ ಮೇರೆಗೆ ಪೊಲೀಸರು ನನ್ನ ವಿರುದ್ಧ ಪ್ರಕರಣವನ್ನು ದಾಖಲು ಮಾಡಿದ್ದು, ಈ ಸಂಬಂಧ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ನಂಜನಗೂಡು ಇಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುತ್ತದೆ ಎಂದರೆ ಸರಿಯಲ್ಲ. ಸದರಿ ಪ್ರಕರಣದಲ್ಲಿ ನಾನು ಜಾಮೀನು ಪಡೆದು ಪ್ರತಿ ತಿಂಗಳು ಬಿಳಿಗೆರೆ ಪೊಲೀಸ್ ಠಾಣೆಯಲ್ಲಿ ನನ್ನ ಸಹಿ ಮಾಡುತ್ತಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆ ಸಮಯ ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ವಿಷಯಗಳಿಗೆ ಸಂಬಂಧಿಸಿದಂತೆ ಹಾಗೂ ಈ ಪ್ರಕರಣದ ಸಂಬಂಧ ನನ್ನ ಬಳಿ ಯಾವುದೇ ದಾಖಲೆಗಳು ಇರುವುದಿಲ್ಲ ಎಂದರೆ ಸರಿ. ನಾನು ಮನೆ ಮಾರಾಟ ಮಾಡಿದ್ದೇನೆ ಎಂದು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ್ದು, ಆ ಸಂಬಂಧ ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ಸಿದ್ಧನಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಈ ಹಿಂದೆ ಮಾಡಿದ್ದ ಸಾಲದ

ಮರುಪಾವತಿ ಮಾಡುವ ಉದ್ದೇಶದಿಂದ ಪಿರ್ಯಾದಿದಾರರಿಂದ ರೂ.3,00,000/- ಗಳನ್ನು ಸಾಲವಾಗಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ಕೇವಲ ರೂ.20,000/- ಗಳನ್ನು ಪಡೆದಿರುತ್ತೇನೆ ಎಂದು ನುಡಿಯುತ್ತಾರೆ. ನನಗೆ ಇದ್ದ ದುರಭ್ಯಾಸಗಳ ಸಲುವಾಗಿ ನಾನು ಸಾಲ ಮಾಡಿಕೊಂಡಿದ್ದು, ಸದರಿ ಸಾಲವನ್ನು ತೀರಿಸುವ ಉದ್ದೇಶದಿಂದ ಪಿರ್ಯಾದಿದಾರರಿಂದ ರೂ.3,00,000/- ಗಳನ್ನು ಸಾಲ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ನಾನು ಸಾಲ ಪಡೆದ ಸಮಯ, ಸಾಲವನ್ನು 6 ತಿಂಗಳ ಒಳಗಾಗಿ ಮರುಪಾವತಿ ಮಾಡುವುದಾಗಿ ತಿಳಿಸಿದ್ದು, 6 ತಿಂಗಳ ನಂತರ ಪಿರ್ಯಾದಿದಾರರು ನನ್ನನ್ನು ಸಾಲದ ಹಣವನ್ನು ಮರುಪಾವತಿ ಮಾಡುವಂತೆ ಕೇಳಿದಾಗ ನಿಪಿ-1 ರ ಚೆಕ್ ಅನ್ನು ಪಿರ್ಯಾದಿದಾರರಿಗೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ಹಣವನ್ನು ಮರುಪಾವತಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಪಿರ್ಯಾದಿದಾರರಿಂದ ಪಡೆದ ಸಾಲವನ್ನು ಮರುಪಾವತಿ ಮಾಡುವ ಭಾಧ್ಯತೆಯಿಂದ ತಪ್ಪಿಸಿಕೊಳ್ಳುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2. ನಾನು ಸಕ್ಕರೆ ಕಾರ್ಖಾನೆಯಲ್ಲಿ ಕೆಲಸ ಮಾಡುವ ಸಮಯ ನಾನು ಅನೇಕರಿಂದ ಸಾಲ ಪಡೆದು ಮೋಸ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ಪಿರ್ಯಾದಿದಾರರಿಂದ ಸಾಲ ಪಡೆದು 3 ಚೆಕ್‌ಗಳನ್ನು ಭದ್ರತೆಗಾಗಿ ನೀಡಿದ್ದು, ಅವುಗಳನ್ನು ದುರುಪಯೋಗ ಪಡಿಸಿಕೊಂಡು ನನ್ನ ವಿರುದ್ಧ ಪ್ರಕರಣಗಳನ್ನು ದಾಖಲು ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ನಾನು ಪಿರ್ಯಾದಿದಾರರು ಮಹದೇವು ರವರ ಮುಖೇನ ನನ್ನ ವಿರುದ್ಧ ಪ್ರಕರಣವನ್ನು ದಾಖಲಿಸಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪಿರ್ಯಾದಿದಾರರಿಗೆ ಮರುಪಾವತಿ ಮಾಡಿದ ಸಾಲದ ಸಂಬಂಧ ರಶೀದಿಯನ್ನು ಪಡೆದುಕೊಂಡಿರುವುದಿಲ್ಲ ಆದರೆ, ನಾನು ಪಿರ್ಯಾದಿದಾರರಿಗೆ ನೀಡಿದ್ದ, ಚೆಕ್ ಅನ್ನು ಮರುಪಾವತಿ ಮಾಡುವಂತೆ ಕೇಳಿದಾಗ ಅದು ಕಳೆದುಹೋಗಿರುತ್ತದೆ ಎಂದು ಪಿರ್ಯಾದಿದಾರರು ನನಗೆ ತಿಳಿಸಿರುತ್ತಾರೆ. ನಾನು ಪಿರ್ಯಾದಿದಾರರಿಂದ ರೂ.3,00,000/- ಗಳನ್ನು ಸಾಲವಾಗಿ ಪಡೆದಿರುವುದರಿಂದ ಅವರಿಗೆ ಸದರಿ ಹಣವನ್ನು ಮರುಪಾವತಿ ಮಾಡಲು ನಾನು ಭಾಧ್ಯಸ್ಥನು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ಪಿರ್ಯಾದಿದಾರರಿಂದ ರೂ.20,000/- ಗಳನ್ನು ಸಾಲವಾಗಿ ಪಡೆದಿದ್ದು, ಅದನ್ನು ಈಗಾಗಲೇ ಮರುಪಾವತಿ ಮಾಡಿರುತ್ತೇನೆ ಎಂದು

ನುಡಿಯುತ್ತಾರೆ. ನಾನು ಪಿರ್ಯಾದಿದಾರರಿಗೆ ಮೋಸ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**